(99)

# ಸಹಾಯಕ ಆಯುಕ್ತರ ನ್ಯಾಯಾಲಯ, ಬಳ್ಳಾರಿ

ಸಂ: ಕಂದಾಯ/ಅಪೀಲು/24/14-15 ದಿನಾಂಕ : 07-06-2016

ಉಪಸ್ಥಿತರು: **ಶ್ರೀಮತಿ ಕೆ. ಅನ್ನಪೂರ್ಣ** (ಕ.ಆ.ಸೇ)

**ಸಹಾಯಕ ಆಯುಕ್ತರು, ಬಳ್ಳಾರಿ.**

| ವಾದಿಗಳು | ಪ್ರತಿವಾದಿಗಳು |
|---|---|
| 1) ದೇವಬಂದ ವೆಂಕಟಲಕ್ಷ್ಮಮ್ಮ ಗಂಡ ತಿಮ್ಮಣ್ಣ @ ತಿಮ್ಮಪ್ಪ. ವಿ ಕೊಟ್ಟಕೋಟ ,ವಿಡುಪನಕಲ್ಲು ಮಂಡಲಂ ಅನಂತಪು ಜಿಲ್ಲಾ<br><br>(ಡಿ.ನಾರಾಯಣ ವಕೀಲರು ಬಳ್ಳಾರಿ) | 1) ತಹಶೀಲ್ದಾರರು ಬಳ್ಳಾರಿ<br>2) ಕಂದಾಯ ನಿರೀಕ್ಷಕರು ರೂಪನಗುಡಿ<br>3) ಗ್ರಾಮ ಲೆಕ್ಕಾಧಿಕಾರಿಗಳು ಕುಂಟನಹಾಳ್<br>4) ಹಂಪಿ ಪೀರಣ್ಣ ತಂದೆ ಲೇಟ್ ಹಂಪಿ ನಾಗಪ್ಪ ವಿ ಕೊಟ್ಟಕೋಟ ಗ್ರಾಮ ವಿಡುಪನಕಲ್ಲು ಮಂಡಲಂ |

**ದಾವಾ ಜಮೀನಿನ ವಿವರ :-**

| ತಾಲ್ಲೂಕು | ಗ್ರಾಮ | ಸ. ನಂ. | ವಿಸ್ತೀರ್ಣ (ಎಕರೆಗಳಲ್ಲಿ) |
|---|---|---|---|
| ಬಳ್ಳಾರಿ | ಕುಂಟನಹಾಳ್ | 114/ಬಿ ಪೈಕಿ | 6.75 |

--@@@--

ವಾದಿಯು ಅವರ ವಕೀಲರ ಮುಖಾಂತರ ಕರ್ನಾಟಕ ಭೂ ಕಂದಾಯ ಕಾಯ್ದೆ 1964 ರ ಕಲಂ 136(2) ರಡಿಯಲ್ಲಿ ಕಂದಾಯ ನಿರೀಕ್ಷಕರು ರೂಪನಗುಡಿ ಇವರ ಆರ್ ನಂ ಹೆಚ್ 17/2012-13 ದಿನಾಂಕ 02/08/2013 ರ ವಿರುದ್ಧ ಈ ನ್ಯಾಯಾಲಯಕ್ಕೆ ಮೇಲ್ಮನವಿಯನ್ನು ಸಲ್ಲಿಸಿರುತ್ತಾರೆ. ಸದರಿ ಮೇಲ್ಮನವಿಯನ್ನು ಸಲ್ಲಿಸುವಲ್ಲಿ ಆದ ವಿಳಂಬಕ್ಕೆ ಕಾಲಮಿತಿ ಕಾಯ್ದೆಯಡಿ ವಿಳಂಬ ಮನ್ನಾಕ್ಕೆ ಅರ್ಜಿ ಸಲ್ಲಿಸಿರುತ್ತಾರೆ. ವಿಳಂಬ ಮನ್ನಾ ಮಾಡಿ ಪ್ರಕರಣವನ್ನು ದಾಖಲಿಸಿಕೊಳ್ಳಲಾಗಿರುತ್ತದೆ. ನೈಸರ್ಗಿಕ ನ್ಯಾಯ ದೃಷ್ಟಿಯಿಂದ ಉಭಯ ಪಕ್ಷಗಾರರಿಗೂ ನೋಟೀಸಗಳನ್ನು ಕಳುಹಿಸಿ ದಿನಾಂಕ: 06-11-2015, 06-05-2016, 01-04-2016, ಮತ್ತು 07-06-2016 ರಂದು ಪ್ರಕರಣದ ವಿಚಾರಣೆಯನ್ನು ಕೈಗೊಳ್ಳಲಾಗಿರುತ್ತದೆ.

ಸದರಿ ಪ್ರಕರಣಕ್ಕೆ ಸಂಬಂಧಿಸಿದಂತೆ ವಾದಿಗಳು ಅವರ ವಕೀಲರು ಮುಖಾಂತರ ದಿನಾಂಕ: 17-06-2014 ರಂದು ಈ ನ್ಯಾಯಾಲಯಕ್ಕೆ ಹಾಜರಾಗಿ, ಬಳ್ಳಾರಿ ತಾಲ್ಲೂಕಿನ ಕುಂಟನಹಾಳ್ ಗ್ರಾಮದ ಸ.ನಂ 114/ಬಿ ಪೈಕಿ ವಿಸ್ತೀರ್ಣ: 6.75 ಎಕರೆ ಜಮೀನಿಗೆ ಸಂಬಂಧಿಸಿದಂತೆ ಕಂದಾಯ ನಿರೀಕ್ಷಕರು ರೂಪನಗುಡಿ ಇವರ ಆರ್ ನಂ ಹೆಚ್ 17/2012-13 ದಿನಾಂಕ 02/08/2013 ರ ವಿರುದ್ಧ ಮೇಲ್ಮನವಿ ರನ್ವಯ ಪ್ರತಿವಾದಿ 4 ರವರ ಹೆಸರಿಗೆ ಹಕ್ಕು ಬದಲಾವಣೆ ಮಂಜೂರು ಮಾಡಿರುವುದರ ವಿರುದ್ಧ ಮೇಲ್ಮನವಿಯನ್ನು ಸಲ್ಲಿಸಿರುತ್ತಾರೆ. ಆದರೆ ಪ್ರಸ್ತಾಪಿತ ಜಮೀನುಗಳ ವಿವಾದಕ್ಕೆ ಸಂಬಂಧಿಸಿದಂತೆ ವಾದಿ ಮತ್ತು ಪ್ರತಿವಾದಿಗಳು ಗ್ರಾಮದ ಹಿರಿಯರು ಮತ್ತು ಹಿತೈಶಿಗಳ ಸಮ್ಮುಖದಲ್ಲಿ ಇತ್ಯರ್ಥ ಪಡಿಸಿಕೊಂಡಿರುವುದಾಗಿ ತಿಳಿಸಿ, ಮೇಲ್ಮನವಿಯನ್ನು ಹಿಂಪಡೆಯಲು ಕೋರಿ ಈ ನ್ಯಾಯಾಲಯಕ್ಕೆ ಮೆಮೊ (NOT PRESS MEMO) ನ್ನು ಸಲ್ಲಿಸಿರುತ್ತಾರೆ.

ಕಾರಣ ಸದರಿ ಪ್ರಕರಣವನ್ನು ಮುಂದುವರೆಸಲು ಆಸಕ್ತಿ ಇಲ್ಲವೆಂದು ತಿಳಿಸಿ ವಾದಿಪರ ವಕೀಲರು ಮೆಮೋ (NOT PRESS MEMO) ಸಲ್ಲಿಸಿರುವ ಮೇರೆಗೆ ಹಾಗೂ ಮುಕ್ತಾಯಗೊಳಿಸಲು ಕೋರಿ ಸಹಿ ಮಾಡಿ ಒಪ್ಪಿಗೆಯನ್ನು ಸೂಚಿಸಿರುವುದರಿಂದ ಈ ಪ್ರಕರಣವನ್ನು ಇದೇ ಹಂತದಲ್ಲಿ ಮುಕ್ತಾಯಗೊಳಿಸಲು ಹಾಗೂ ದಿನಾಂಕ: 21-06-2014 ರ ಈ ನ್ಯಾಯಾಲಯವ ತಡೆಯಾಜ್ಞೆ ಆದೇಶವನ್ನು ತೆರವುಗೊಳಿಸಿ , ಪ್ರಕರಣ ಮುಕ್ತಾಯ ಗೊಳಿಸುವ ಈ ಕೆಳಕಂಡಂತೆ ಆದೇಶಿಸಲಾಗಿದೆ.

## :: ಆದೇಶ ::

ಪೀಠಿಕೆಯಲ್ಲಿ ವಿವರಿಸಿದ ಕಾರಣಗಳ ಹಿನ್ನೆಲೆಯಲ್ಲಿ ಬಳ್ಳಾರಿ ತಾಲ್ಲೂಕಿನ ಕುಂಟನಹಾಳ್ ಗ್ರಾಮದ ಸ.ನಂ 114/ಬಿ ಪೈಕಿ ವಿಸ್ತೀರ್ಣ: 6.75 ಎಕರೆ ಜಮೀನಿಗೆ ಸಂಬಂಧಿಸಿದಂತೆ ವಾದಿಗಳು ಸಲ್ಲಿಸಿರುವ ಮೆಮೋ (NOT PRESS MEMO) ನ್ನು ಪರಿಗಣಿಸಿ ಇದೇ ಹಂತದಲ್ಲಿ ಮುಕ್ತಾಯಗೊಳಿಸುತ್ತಾ; ಪ್ರಕರಣವನ್ನು ವಜಾ ಮಾಡಿ ಆದೇಶಿಸಲಾಗಿದೆ.

ದಿನಾಂಕ: 21-06-2014 ರ ಈ ನ್ಯಾಯಾಲಯದ ತಡೆಯಾಜ್ಞೆ ಆದೇಶವನ್ನು ತೆರವುಗೊಳಿಸಲು ತಹಶೀಲ್ದಾರರು ಬಳ್ಳಾರಿ ಇವರಿಗೆ ಸೂಚಿಸಿದೆ.

ಈ ಆದೇಶವನ್ನು ಹೇಳಿ, ಬರೆಯಿಸಿ, ತಪ್ಪುಗಳನ್ನು ತಿದ್ದಿ ದಿನಾಂಕ: 07-06-2016 ರಂದು ಬಹಿರಂಗ ನ್ಯಾಯಾಲಯದಲ್ಲಿ ಘೋಷಿಸಲಾಗಿದೆ.

ಸಹಾಯಕ ಆಯುಕ್ತರು,
ಬಳ್ಳಾರಿ.

ಸಹಾಯಕ ಆಯುಕ್ತರು
ಬಳ್ಳಾರಿ.

ಪ್ರತಿಯನ್ನು :ವಾದಿ ಮತ್ತು ಪ್ರತಿವಾದಿಗಳಿಗೆ , ಮತ್ತು ತಹಶೀಲ್ದಾರರು ಬಳ್ಳಾರಿ ಇವರಿಗೆ ಸೂಕ್ತ ಕ್ರಮಕ್ಕಾಗಿ .

ಜಾರಿಯಾಗಿದೆ
23/6/16